ನಿ-330- (74)

**ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ವೈ.ಎ. ನಾರಾಯಣಸ್ವಾಮಿ, ಇವರು ನಿಯಮ 330 ಅಡಿಯಲ್ಲಿ ಗಮನ ಸೆಳೆಯುವ ಸೂಚನೆ.**

## ವಿಷಯ

ಕರ್ನಾಟಕ ರಾಜ್ಯದಲ್ಲಿ ಸುಮಾರು 430ಕ್ಕೂ ಹೆಚ್ಚು ಸರ್ಕಾರಿ ಕಾಲೇಜುಗಳಿದ್ದು, ಕಳೆದ 12 ವರ್ಷಗಳಿಂದಲೂ ಪ್ರಾಂಶುಪಾಲರ ಹುದ್ದೆಗಳಿಗೆ ಬಡ್ತಿ ನೀಡದಿರುವುದರಿಂದ, ಕಾಲೇಜುಗಳಲ್ಲಿನ ಆಡಳಿತ ಮತ್ತು ಶೈಕ್ಷಣಿಕ ಪ್ರಗತಿ ಕುಂಠಿತವಾಗುತ್ತಿದ್ದು ಹಾಗೂ ಅರ್ಹತೆ ಇರುವ ಬಹಳಷ್ಟು ಪ್ರಾಧ್ಯಾಪಕರು ಬಡ್ತಿಯಿಂದ ವಂಚಿತರಾಗುತ್ತಿದ್ದು, ಪ್ರಾಂಶುಪಾಲರ ಬಡ್ತಿ ಪ್ರಕ್ರಿಯೆ ಬಗ್ಗೆ ಸದನದಲ್ಲಿ ಪ್ರಸ್ತಾಪಿಸಲು ಬಯಸುತ್ತೇನೆ.

## ಉತ್ತರ

ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 91 ಡಿಸಿಇ 2004, ದಿನಾಂಕ:25.09.2009 ರಲ್ಲಿ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಲಾಗಿರುತ್ತದೆ. ಈ ನಿಯಮಗಳಲ್ಲಿ ಪ್ರಾಂಶುಪಾಲರ ಹುದ್ದೆಗಳನ್ನು ಯು.ಜಿ.ಸಿ. ನಿಯಮಗಳನ್ವಯ ಶೇಕಡ 100 ರಷ್ಟು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ನಿರ್ದಿಷ್ಟಪಡಿಸಿರುತ್ತದೆ. ಸರ್ಕಾರವು ಕಾಲೇಜು ಶಿಕ್ಷಣ ಇಲಾಖೆಯಲ್ಲಿ 2006ರ ಯು.ಜಿ.ಸಿ. ಪರಿಷ್ಕೃತ ವೇತನ ಶ್ರೇಣಿಗಳನ್ನು ಅಳವಡಿಸಿ ಅನುಷ್ಠಾನಗೊಳಿಸಲು ಹೊರಡಿಸಿರುವ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 37 ಯುಎನ್ಇ 2009, ದಿನಾಂಕ: 24.12.2009ರಲ್ಲಿ ಪ್ರಾಂಶುಪಾಲರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆದೇಶಿಸಲಾಗಿದೆ. ಅದರಂತೆ, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ 410 ಪ್ರಾಂಶುಪಾಲರ ಹುದ್ದೆಗಳ ಪೈಕಿ ಆರ್ಥಿಕ ಇಲಾಖೆಯ ಸಹಮತಿ ಪಡೆದು 310 ಪ್ರಾಂಶುಪಾಲರ ಹುದ್ದೆಗಳನ್ನು ಯು.ಜಿ.ಸಿ. ನಿಯಮಗಳನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲು ಸರ್ಕಾರದ ಆದೇಶ ಸಂಖ್ಯೆ: ಇಡಿ 121 ಡಿಸಿಇ 2018, ದಿನಾಂಕ: 11.06.2019 ರಲ್ಲಿ ಸರ್ಕಾರದ ಅನುಮತಿ ನೀಡಲಾಗಿರುತ್ತದೆ.

ಅದರಂತೆ, 310 ಪ್ರಾಂಶುಪಾಲರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲು ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 121 ಡಿಸಿಇ 2018, ದಿನಾಂಕ: 09.09.2020 ರಲ್ಲಿ ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆ) (ಪ್ರಾಂಶುಪಾಲರು (ಯುಜಿ) ಹುದ್ದೆಗಳ ನೇಮಕಾತಿ) (ವಿಶೇಷ) ನಿಯಮಗಳು,2020ನ್ನು ರೂಪಿಸಲಾಗಿರುತ್ತದೆ ಹಾಗೂ ನೇಮಕಾತಿ ಪ್ರಕ್ರಿಯೆಯನ್ನು ಪ್ರಾರಂಭಿಸಲು ಸರ್ಕಾರದ ಪತ್ರ ಸಂಖ್ಯೆ: ಇಡಿ 257 ಡಿಸಿಇ 2019, ದಿನಾಂಕ: 29.06.2021 ರಲ್ಲಿ ಅನುಮತಿ ನೀಡಲಾಗಿರುತ್ತದೆ.

ಮುಂದುವರೆದು, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಪ್ರಾಂಶುಪಾಲರ ಹುದ್ದೆಗೆ ಸೇವಾ ಜೇಷ್ಠತೆಯಲ್ಲಿ ಹಿರಿಯರಾದ ಹಾಗೂ ಅನುಭವಿ ಬೋಧಕರಿಗೆ ಪ್ರಾಂಶುಪಾಲರ ಪ್ರಭಾರವನ್ನು ವಹಿಸುವುದರ ಮೂಲಕ ಕಾಲೇಜಿನ ಆಡಳಿತ ನಿರ್ವಹಣೆಗೆ ಮತ್ತು ಗುಣಾತ್ಮಕ ಶಿಕ್ಷಣಕ್ಕೆ ಶೈಕ್ಷಣಿಕವಾಗಿ ಯಾವುದೇ ತೊಂದರೆಯಾಗದಂತೆ ಕ್ರಮವಹಿಸಲಾಗುತ್ತಿದೆ.

**ಇಡಿ 238 ಡಿಸಿಇ 2021**

**(ಡಾ. ಅಶ್ವಥ್ ನಾರಾಯಣ ಸಿ.ಎನ್.)**
**ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ.ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು**